# All India Radio: Bangalore
# National Bulletin In Kannada
# 20.03.2025 7.35 a.m.

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**20.03.2025 7.35 a.m.**

**<><><><>**

ಮುಖ್ಯಾಂಶಗಳು

1. ರಾಷ್ಟ್ರಪತಿ ಭವನದ ಅಮೃತ್ ಉದ್ಯಾನವನದಲ್ಲಿ ಇಂದು ನಡೆಯಲಿರುವ ಉದ್ಯಮ ಉತ್ಸವದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಭಾಗಿ
2. ಪರ್ಯಾಯ ಹಾಗೂ ಜೈವಿಕ ಇಂಧನಕ್ಕೆ ಸರ್ಕಾರದಿಂದ ವಿಶೇಷ ಆದ್ಯತೆ - ಸಚಿವ ನಿತಿನ್ ಗಡ್ಕರಿ
3. ಅಲ್ಪ ಸಂಖ್ಯಾತರು ಸೇರಿದಂತೆ ಎಲ್ಲ ಸಮುದಾಯಗಳ ಸಾಮಾಜಿಕ, ಆರ್ಥಿಕ ಸ್ಥಿತಿಗತಿ ಸುಧಾರಣೆಗೆ ಸರ್ಕಾರದ ಯತ್ನ - ಸಚಿವ ಕಿರಣ್ ರಿಜಿಜು
4. ಸ್ವಿಸ್ ಓಪನ್ ಬ್ಯಾಡ್ಮಿಂಟನ್ ಮಹಿಳಾ ಡಬಲ್ಸ್ ಪ್ರೀ ಕ್ವಾರ್ಟರ್ ಫೈನಲ್‌ನಲ್ಲಿಂದು ಭಾರತ-ಜರ್ಮನ್ ಜೋಡಿ ಸೆಣಸು

<><><><>

ರಾಷ್ಟ್ರಪತಿ ಭವನದ ಅಮೃತ್ ಉದ್ಯಾನವನದಲ್ಲಿ ಇಂದು ನಡೆಯಲಿರುವ ಉದ್ಯಮ ಉತ್ಸವದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಭಾಗವಹಿಸಲಿದ್ದಾರೆ. ದೇಶದ ವೈವಿಧ್ಯಮಯ ಪರಂಪರೆಯನ್ನು ಸಾರ್ವಜನಿಕರಿಗೆ ತಲುಪಿಸುವ ಮೂಲಕ ಸಣ್ಣ, ಅತಿ ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳ ಸಬಲೀಕರಣ ಮತ್ತು ಪ್ರೋತ್ಸಾಹಕ್ಕೆ ಕೇಂದ್ರ ಸಣ್ಣ, ಅತಿ ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳ ಸಚಿವಾಲಯ ಆಯೋಜಿಸುತ್ತಿರುವ ಈ ಕಾರ್ಯಕ್ರಮ ಇದೇ ೩೦ರವರೆಗೆ ನಡೆಯಲಿದೆ. ಕರಕುಶಲ ವಸ್ತುಗಳು, ಕೃಷಿ ಆಧಾರಿತ ಉತ್ಪನ್ನಗಳು ಸೇರಿದಂತೆ ವೈವಿದ್ಯಮಯ ಉತ್ಪನ್ನಗಳನ್ನು ಈ ಮೇಳದಲ್ಲಿ ಪ್ರದರ್ಶನಕ್ಕೆ ಇಡಲಾಗುತ್ತಿದೆ. ಕಾರ್ಯಕ್ರಮದ ಭಾಗವಾಗಿ ಹುನರ್ ಸಂಗೀತ್, ನುಕ್ಕಡ್ ನಾಟಕ್, ರಾಜಸ್ಥಾನಿ ಬೊಂಬೆ ನಿರ್ಮಾಣದ ಪ್ರದರ್ಶನಗಳು ನಡೆಯಲಿವೆ. ಇಂದಿನಿಂದ ಆರಂಭವಾಗುತ್ತಿರುವ ಈ ಉದ್ಯಮ ಉತ್ಸವಕ್ಕೆ ಬೆಳಗ್ಗೆ ೧೦ ಗಂಟೆಯಿಂದ ಸಂಜೆ ೮ ಗಂಟೆಯವರೆಗೆ ಸಾರ್ವಜನಿಕರಿಗೆ ಮುಕ್ತ ಪ್ರವೇಶವಿರಲಿದೆ.

<><><><>

ದೇಶದ ಒಟ್ಟು ವಿದ್ಯುತ್ ಉತ್ಪಾದನೆಯಲ್ಲಿ ಹಸಿರು ವಿದ್ಯುತ್ ಶೇಕಡಾ ೪೨ ಕ್ಕಿಂತ ಹೆಚ್ಚು ಎಂದು ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವ ನಿತಿನ್ ಗಡ್ಕರಿ ಹೇಳಿದ್ದಾರೆ. ನವದೆಹಲಿಯಲ್ಲಿ ನಿನ್ನೆ ನಡೆದ ೩೨ ನೇ ಕನ್ವರ್ಜೆನ್ಸ್ ಇಂಡಿಯಾ ಎಕ್ಸ್‌ಪೋ, ಸ್ಮಾರ್ಟ್ ಮೊಬಿಲಿಟಿ ಇಂಡಿಯಾ ಎಕ್ಸ್‌ಪೋ ಹಾಗೂ ೧೦ ನೇ ಸ್ಮಾರ್ಟ್ ಸಿಟೀಸ್ ಇಂಡಿಯಾ ೨೦೨೫ ಅನ್ನುದ್ದೇಶಿಸಿ ಮಾತನಾಡಿದ ಸಚಿವ ಗಡ್ಕರಿ, ಸರ್ಕಾರ ಪರ್ಯಾಯ ಇಂಧನ ಹಾಗೂ ಜೈವಿಕ ಇಂಧನಕ್ಕೆ ವಿಶೇಷ ಆದ್ಯತೆ ನೀಡುತ್ತಿದೆ ಎಂದು ಒತ್ತಿ

ಹೇಳಿದರು. ಪ್ರಯಾಣ ಸಮಯ ತಗ್ಗಿಸುವ ಗುರಿ ಹೊಂದಿರುವ ವಿವಿಧ ಮೂಲಸೌಕರ್ಯ ಯೋಜನೆಗಳನ್ನು ವಿವರಿಸಿದ ಸಚಿವರು, ದೆಹಲಿ ಹಾಗೂ ಡೆಹ್ರಾಡೂನ್, ದೆಹಲಿ ಹಾಗೂ ಜೈಪುರ ಹಾಗೂ ಚೆನ್ನೈ ಹಾಗೂ ಬೆಂಗಳೂರು ನಡುವಿನ ಅಂತರವನ್ನು ಎರಡು ಗಂಟೆಗಳವರೆಗೆ ಇಳಿಸಲಾಗುವುದು ಎಂದು ಘೋಷಿಸಿದರು. ದೆಹಲಿ ಮತ್ತು ಮುಂಬೈ ನಡುವಿನ ಪ್ರಯಾಣದ ಸಮಯವನ್ನು ಹನ್ನೆರಡು ಗಂಟೆಗಳವರೆಗೆ ಕಡಿತಗೊಳಿಸಲಾಗುವುದು ಎಂದು ಹೇಳಿದ್ದಾರೆ.

<><><>

ದೇಶಾದ್ಯಂತ ಪ್ರಸ್ತುತ ೧೫ ಸಾವಿರ ಜನೌಷಧಿ ಮಳಿಗೆಗಳು ಕಾರ್ಯ ನಿರ್ವಹಿಸುತ್ತಿದ್ದು, ಮುಂದಿನ ೨ ವರ್ಷಗಳಲ್ಲಿ ಇನ್ನು ೧೦ ಸಾವಿರ ಮಳಿಗೆಗಳನ್ನು ತೆರೆಯಲು ಸರ್ಕಾರ ನಿರ್ಧರಿಸಿದೆ ಎಂದು ಕೇಂದ್ರ ಆರೋಗ್ಯ ಸಚಿವ ಜೆ.ಪಿ. ನಡ್ಡಾ ರಾಜ್ಯಸಭೆಗೆ ಹೇಳಿದ್ದಾರೆ. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯದ ಕಾರ್ಯ ವೈಖರಿ ಕುರಿತ ಚರ್ಚೆಯಲ್ಲಿ ಪಾಲ್ಗೊಂಡು ಉತ್ತರಿಸಿದ ಅವರು, ಈ ಮಳಿಗೆಗಳಿಂದಾಗಿ ಸಾರ್ವಜನಿಕರಿಗೆ ಇದುವರೆಗೆ ೩೦ ಸಾವಿರ ಕೋಟಿ ರೂಪಾಯಿ ಉಳಿತಾಯವಾಗಿದೆ. ೨೦೧೭ರಲ್ಲಿ ಪರಿಚಯಿಸಲಾದ ರಾಷ್ಟ್ರೀಯ ಆರೋಗ್ಯ ನೀತಿ ರೋಗ ತಡೆಗಟ್ಟುವಿಕೆ ಮೇಲೆ ಕೇಂದ್ರೀಕರಿಸುವ ಒಂದು ಸಮಗ್ರ ನೀತಿಯಾಗಿದ್ದು, ಹಿಂದಿನ ಆರೋಗ್ಯ ನೀತಿಗಳು ಕೇವಲ ಗುಣಪಡಿಸುವುದರ ಮೇಲೆ ಕೇಂದ್ರೀಕರಿಸಿದ್ದವು ಎಂದರು. ಚರ್ಚೆಯಲ್ಲಿ ಭಾಗವಹಿಸಿದ ಜೆಡಿಎಸ್ ಪರಮೋಚ್ಛ ನಾಯಕ ಹಾಗೂ ಮಾಜಿ ಪ್ರಧಾನಿ ಹೆಚ್.ಡಿ. ದೇವೇಗೌಡ ಗ್ರಾಮೀಣ ಭಾಗದ ಆಸ್ಪತ್ರೆಗಳ ಮೇಲೆ ಹೆಚ್ಚು ಗಮನ ಹರಿಸಬೇಕು. ಗರ್ಭಕಂಠ ಕ್ಯಾನ್ಸರ್‌ನಿಂದ ರಕ್ಷಿಸಲು ಪ್ರೌಢಶಾಲಾ ವಿದ್ಯಾರ್ಥಿನಿಯರ ಲಸಿಕೀಕರಣಕ್ಕೆ ಕೇಂದ್ರ ಸರ್ಕಾರ ಕ್ರಮ ವಹಿಸಬೇಕು ಎಂದರು.

<><><>

ಸುಂಕ ಹೇರಿಕೆ ಮತ್ತು ನಿರ್ಬಂಧಗಳು ವಿಶ್ವದಲ್ಲಿ ನಡೆಯುತ್ತಿರುವ ವಾಸ್ತವಂಶಗಳಾಗಿವೆ ಎಂದು ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ಹೇಳಿದ್ದಾರೆ. ದೆಹಲಿಯಲ್ಲಿ ನಡೆಯುತ್ತಿರುವ ರೈಸಿನಾ ಮಾತುಕತೆಯಲ್ಲಿ ಅವರು, ಸುಂಕಗಳು ಮತ್ತು ನಿರ್ಬಂಧಗಳನ್ನು ನಾವು ಬಯಸಿದರೂ, ಬಯಸದಿದ್ದರೂ ದೇಶಗಳು ಇವುಗಳನ್ನು ಬಳಸಿಕೊಳ್ಳುತ್ತವೆ. ಕಳೆದ ದಶಕವನ್ನು ಅವಲೋಕಿಸಿದರೆ ಆರ್ಥಿಕ ಚಟುವಟಿಕೆಗಳು ಹೆಚ್ಚಾಗಿವೆ. ಇದರಲ್ಲಿ ಹಣಕಾಸು ಅರಿವು , ಇಂಧನ ಪೂರೈಕೆ, ತಂತ್ರಜ್ಞಾನ ಸೇರಿವೆ ಎಂದರು. ಸಮಗ್ರ ರಾಷ್ಟ್ರೀಯ ಶಕ್ತಿಗೆ ಹೋರಾಡುವಾಗ ವಾಣಿಜ್ಯ, ಅತಿ ಪ್ರಮುಖ ಕೊಡುಗೆಯನ್ನು ನೀಡುತ್ತದೆ. ಇಂದು ವಿವಿಧ ವಲಯಗಳನ್ನು ವಿಭಜಿಸುವ ರೇಖೆಗಳು ನಶಿಸಿಹೋಗಿವೆ. ಅಂತಾರಾಷ್ಟ್ರೀಯ ಸಂಬಂಧಗಳನ್ನು ಗಮನಿಸಿದಾಗ ದಶಕದ ಹಿಂದೆ ಹೋಲಿಸಿದರೆ ಇಂದು ಇವು ಹೆಚ್ಚು ನಿರ್ಬಂಧಿತವಾಗಿಲ್ಲ ಎಂದರು.

<><><>

ದೇಶದಲ್ಲಿ ಅಲ್ಪ ಸಂಖ್ಯಾತ ಸಮುದಾಯಗಳು ಸೇರಿದಂತೆ ಎಲ್ಲ ಸಮುದಾಯಗಳ ಸಾಮಾಜಿಕ, ಆರ್ಥಿಕ ಸ್ಥಿತಿಗತಿ ಸುಧಾರಿಸಲು ಸರ್ಕಾರ ಶ್ರಮಿಸುತ್ತಿದೆ ಎಂದು ಕೇಂದ್ರ ಅಲ್ಪಸಂಖ್ಯಾತ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಲೋಕಸಭೆಗೆ ತಿಳಿಸಿದ್ದಾರೆ. ಲೋಕಸಭೆಗೆ ನೀಡಿರುವ ಲಿಖಿತ ಉತ್ತರದಲ್ಲಿ ಸಚಿವ

ರಿಜಿಜು, ಈ ಸಮುದಾಯಗಳ ಶೈಕ್ಷಣಿಕ ಸಬಲೀಕರಣಕ್ಕಾಗಿ ಸರ್ಕಾರ ಮೆಟ್ರಿಕ್ ಪೂರ್ವ, ಮೆಟ್ರಿಕ್ ನಂತರದ ಹಾಗೂ ಮೆರಿಟ್ ಆಧಾರಿತ ವಿಧ್ಯಾರ್ಥಿ ವೇತನ ಯೋಜನೆಗಳನ್ನು ಜಾರಿಗೊಳಿಸುತ್ತಿದೆ ಎಂದು ವಿವರಿಸಿದ್ದಾರೆ. ರಿಯಾಯಿತಿ ಸಾಲಗಳನ್ನು ಒದಗಿಸಲು ಪ್ರಧಾನಮಂತ್ರಿ ವಿರಾಸತ್ ಕಾ ಸಮವರ್ಧನ್ - ಪಿಎಂ ವಿಕಾಸ್ ಮತ್ತು ರಾಷ್ಟ್ರೀಯ ಅಲ್ಪ ಸಂಖ್ಯಾತರ ಅಭಿವೃದ್ಧಿ ಹಾಗೂ ಹಣಕಾಸು ನಿಗಮ - ಎನ್‌ಎಂಡಿಎಫ್‌ಸಿ ಮೂಲಕ ಉದ್ಯೋಗ ಮತ್ತು ಆರ್ಥಿಕ ಸಬಲೀಕರಣ ಖಾತರಿಪಡಿಸಲು ಯೋಜನೆಗಳನ್ನು ಜಾರಿಗೊಳಿಸಲಾಗುತ್ತದೆ ಎಂದು ವಿವರಿಸಿದ್ದಾರೆ.

<><><><>

ಕಡಿಮೆ ಮೌಲ್ಯದ ಭೀಮ್ ಯುಪಿಐ ವಹಿವಾಟುಗಳನ್ನು ಉತ್ತೇಜಿಸಲು ಪ್ರೋತ್ಸಾಹಕ ಯೋಜನೆಗೆ ಕೇಂದ್ರ ಸಚಿವ ಸಂಪುಟ ನಿನ್ನೆ ಅನುಮೋದನೆ ನೀಡಿದೆ. ನವದೆಹಲಿಯಲ್ಲಿ ಕೇಂದ್ರ ಸಚಿವ ಸಂಪುಟದ ನಿರ್ಧಾರಗಳ ಕುರಿತು ಮಾಧ್ಯಮಗಳಿಗೆ ಮಾಹಿತಿ ನೀಡಿದ ಕೇಂದ್ರ ಮಾಹಿತಿ ಮತ್ತು ಪ್ರಸಾರ ಖಾತೆ ಸಚಿವ ಅಶ್ವಿನಿ ವೈಷ್ಣವ್, ಅಂದಾಜು ಒಂದು ಸಾವಿರದ ೫೦೦ ಕೋಟಿ ರೂಪಾಯಿ ವೆಚ್ಚದಲ್ಲಿ ಈ ಯೋಜನೆ ಜಾರಿಯಾಗಲಿದೆ ಎಂದರು. ಇದರಿಂದ ಸಣ್ಣ ವ್ಯಾಪಾರಿಗಳ ಯಾವುದೇ ಹೆಚ್ಚುವರಿ ವೆಚ್ಚವಿಲ್ಲದೇ ಯುಪಿಐ ಸೇವೆಗಳನ್ನು ಪಡೆಯಬಹುದಾಗಿದೆ. ಇದರ ಜೊತೆಗೆ ಸಣ್ಣ ವ್ಯಾಪಾರಿಗಳಿಗೆ ೨ ಸಾವಿರವರೆಗಿನ ವಹಿವಾಟುಗಳಿಗೆ ಪ್ರತಿ ವಹಿವಾಟಿನ ಮೌಲ್ಯಕ್ಕೆ ಶೇಕಡ ೦.೧೫ ರಷ್ಟು ಪ್ರೋತ್ಸಾಹ ಧನ ನೀಡಲಾಗುವುದು ಎಂದು ಸಚಿವರು ತಿಳಿಸಿದ್ದಾರೆ. ಅಸ್ಸಾಂನ ನಾಮ್‌ರೂಪ್‌ನಲ್ಲಿರುವ ಬ್ರಹ್ಮಪುತ್ರ ವ್ಯಾಲಿ ರಸಗೊಬ್ಬರ ನಿಗಮದ ಆವರಣದಲ್ಲಿ ಹೊಸ ಬ್ರೌನ್ ಫೀಲ್ಡ್ ಅಮೋನಿಯಾ ಯೂರಿಯಾ ಸಂಕೀರ್ಣ ರಸಗೊಬ್ಬರ ಘಟಕ ಸ್ಥಾಪನೆಗೆ ಕೇಂದ್ರ ಸಚಿವ ಸಂಪುಟ ಅನುಮೋದನೆ ನೀಡಿದೆ. ಈ ಕುರಿತು ಮಾಹಿತಿ ನೀಡಿರುವ ಕೇಂದ್ರ ಸಚಿವ ಅಶ್ವಿನಿ ವೈಷ್ಣವ್, ಈ ಯೋಜನೆಯಿಂದಾಗಿ ದೇಶೀಯ ಯೂರಿಯಾ ಉತ್ಪಾದನಾ ಸಾಮರ್ಥ್ಯ ಹೆಚ್ಚಳವಾಗಲಿದ್ದು, ರಸಗೊಬ್ಬರಗಳ ಹೆಚ್ಚುತ್ತಿರುವ ಬೇಡಿಕೆಯನ್ನು ಪೂರೈಸುತ್ತಿದೆ. ಈ ಘಟಕ ವಾರ್ಷಿಕ ೧೨.೭ ಲಕ್ಷ ಮೆಟ್ರಿಕ್ ಟನ್ ಯೂರಿಯಾ ಉತ್ಪಾದನಾ ಸಾಮರ್ಥ್ಯ ಹೊಂದಿರಲಿದೆ ಎಂದಿದ್ದಾರೆ. ಮಹಾರಾಷ್ಟ್ರದ ಜೆಎನ್‌ಪಿಎ ಬಂದರಿನಿಂದ ಚೌಕ್‌ವರೆಗೆ ಷಟ್‌ಪಥ ಹಸಿರು ಹೆದ್ದಾರಿ ನಿರ್ಮಾಣಕ್ಕೆ ಕೇಂದ್ರ ಆರ್ಥಿಕ ವ್ಯವಹಾರಗಳ ಸಂಪುಟ ಸಮಿತಿ ಅನುಮೋದನೆ ನೀಡಿದೆ. ಈ ಯೋಜನೆಯನ್ನು ನಿರ್ಮಾಣ, ನಿರ್ವಹಣೆ ಮತ್ತು ವರ್ಗಾವಣೆ ವಿಧಾನದಡಿ ಒಟ್ಟು ೪ ಸಾವಿರದ ೫೦೦ ಕೋಟಿ ರೂಪಾಯಿಗಳ ಬಂಡವಾಳ ವೆಚ್ಚದಲ್ಲಿ ಅನುಷ್ಠಾನಗೊಳಿಸಲಾಗುವುದು.

<><><><>

ಉಕ್ರೇನ್ ಅಧ್ಯಕ್ಷ ವೊಲೊಡಿಮಿರ್ ಝೆಲೆನ್ಸ್ಕಿ ಅವರು ರಷ್ಯಾ ವಿರುದ್ಧದ ಸಂಘರ್ಷದಲ್ಲಿ ಭಾಗಶಃ ಕದನ ವಿರಾಮಕ್ಕೆ ಒಪ್ಪಿಕೊಂಡಿದ್ದಾರೆ ಎಂದು ಅಮೆರಿಕ ಹೇಳಿದೆ. ಈ ಬಗ್ಗೆ ಅಮೆರಿಕ ಅಧ್ಯಕ್ಷ ಡೋನಾಲ್ಡ್ ಟ್ರಂಪ್ ಹಾಗೂ ರಷ್ಯಾದ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಚರ್ಚಿಸಿದ್ದಾರೆ. ನಿನ್ನೆ ರಾತ್ರಿ ಅಧ್ಯಕ್ಷ ಟ್ರಂಪ್ ಅವರು, ಉಕ್ರೇನ್ ಅಧ್ಯಕ್ಷ ಝೆಲೆನ್ಸ್ಕಿ ಅವರಿಗೆ ದೂರವಾಣಿ ಕರೆ ಮಾಡಿ ಪುಟಿನ್ ಅವರೊಂದಿಗಿನ ಮಾತುಕತೆಯ ಬಗ್ಗೆ ವಿವರಿಸಿದ್ದಾರೆ ಎಂದು ಶ್ವೇತ ಭವನ ತಿಳಿಸಿದೆ. ಈ ಸಂದರ್ಭದಲ್ಲಿ ಪ್ರಮುಖ ವಿಷಯಗಳ ಬಗ್ಗೆ ಚರ್ಚಿಸಲಾಯಿತು ಎಂದು ಹೇಳಲಾಗಿದೆ.

<><><><>

ಸ್ವಿಟ್ಜರ್‌ಲ್ಯಾಂಡ್‌ನ ಬಾಸಲ್‌ನಲ್ಲಿ ನಡೆಯುತ್ತಿರುವ ಸ್ವಿಸ್ ಓಪನ್ ಬ್ಯಾಡ್ಮಿಂಟನ್ ಮಹಿಳಾ ಡಬಲ್ಸ್ ಪ್ರೀ ಕ್ವಾರ್ಟರ್ ಫೈನಲ್‌ನಲ್ಲಿ ಭಾರತದ ಟ್ರಿಸಾ ಜಾಲಿ ಮತ್ತು ಗಾಯತ್ರಿ ಗೋಪಿಚಂದ್, ಜರ್ಮನ್ ಜೋಡಿಯಾದ ಸೆಲಿನ್ ಹಬ್ಷ್ ಮತ್ತು ಅಮೆಲಿ ಲೆಹ್ಮನ್ ಅವರನ್ನು ಎದುರಿಸಲಿದ್ದಾರೆ. ನಿನ್ನೆ ನಡೆದ ಮೊದಲ ಸುತ್ತಿನಲ್ಲಿ ಭಾರತದ ಈ ಜೋಡಿ ಸ್ವಿಟ್ಜರ್‌ಲ್ಯಾಂಡ್‌ನ ಅಲೈನ್ ಮುಲ್ಲರ್ ಮತ್ತು ನೆದರ್‌ಲ್ಯಾಂಡ್ಸ್ ಕೆಲ್ಲಿ ವ್ಯಾನ್ ಬುಯಿಟೆನ್ ಅವರನ್ನು ೨೧-೧೬, ೨೧-೧೭ ಸೆಟ್‌ಗಳ ಅಂತರದಲ್ಲಿ ಸೋಲಿಸಿತು. ಇತರ ಪಂದ್ಯದಲ್ಲಿ ೨ ಬಾರಿ ಪದಕ ವಿಜೇತೆ ಪಿ.ವಿ. ಸಿಂಧು ಮಹಿಳಾ ಸಿಂಗಲ್ಸ್ ವಿಭಾಗದ ಮೊದಲ ಸುತ್ತಿನಲ್ಲಿ ಡೆನ್ಮಾರ್ಕ್‌ನ ಜೂಲಿ ದಾವಾಲ್, ಜಾಕೋಬ್ಸೆನ್ ವಿರುದ್ಧ ೧೭-೨೧, ೧೯-೨೧ ಅಂತರದಲ್ಲಿ ಪರಾಭವಗೊಂಡಿದ್ದಾರೆ. ಪುರುಷರ ಸಿಂಗಲ್ಸ್ ವಿಭಾಗದ ೩೨ರ ಸುತ್ತಿನ ಪಂದ್ಯದಲ್ಲಿ ಭಾರತದ ಕಿಡಂಬಿ ಶ್ರೀಕಾಂತ್, ಎಚ್.ಎಸ್. ಪ್ರಣಾಯ್ ಅವರನ್ನು ೨೩-೨೧, ೨೩-೨೧ ಅಂತರದಲ್ಲಿ ಪರಾಭವಗೊಳಿಸಿದ್ದಾರೆ.

<><><><>

ಪಶ್ಚಿಮ ಬಂಗಾಳ ಅಸ್ಸಾಂ ಮತ್ತು ಮೇಘಾಲಯದಲ್ಲಿ ಇಂದು ಗುಡುಗು ಹಾಗೂ ಬಿರುಗಾಳಿ ಸಹಿತ ಮಳೆಯಾಗುವ ಸಾಧ್ಯತೆಯಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಛತ್ತೀಸ್‌ಗಢ, ಒಡಿಶಾ, ಜಾರ್ಖಂಡ್, ಉತ್ತರಪ್ರದೇಶ ಹಾಗೂ ಮಧ್ಯಪ್ರದೇಶದಲ್ಲೂ ಇದೇ ರೀತಿಯ ಪರಿಸ್ಥಿತಿ ಇರಲಿದೆ. ಪಂಜಾಬ್, ಹರಿಯಾಣ, ಚಂಡೀಗಢ ಹಾಗೂ ದೆಹಲಿಯ ಹಲವು ಸ್ಥಳಗಳಲ್ಲಿ ಮಿಂಚು ಸಹಿತ ಮಳೆ ಬೀಳುವ ಸಾಧ್ಯತೆಯಿದೆ ಎಂದು ಇಲಾಖೆ ತಿಳಿಸಿದೆ. ತಮಿಳುನಾಡು, ಪುದುಚೇರಿ, ಕಾರೈಕಲ್ ಹಾಗೂ ಕರ್ನಾಟಕದ ಒಳನಾಡಿನ ಹಲವು ಸ್ಥಳಗಳಲ್ಲಿ ಬಿಸಿ ವಾತಾವರಣವಿರಲಿದೆ ಎಂದು ಮುನ್ಸೂಚನೆ ನೀಡಿದೆ. ಮುಂದಿನ ಎರಡು ದಿನಗಳಲ್ಲಿ ವಾಯವ್ಯ ಭಾರತದಲ್ಲಿ ಗರಿಷ್ಠ ತಾಪಮಾನದಲ್ಲಿ ಸುಮಾರು ೨ ಡಿಗ್ರಿ ಸೆಲ್ಸಿಯೆಸ್ ಏರಿಕೆಯಾಗಲಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

<><><><>